ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE : 1/6/2020

# ವಿಧಾನ ಪರಿಷತ್ ಪ್ರವೇಶಕ್ಕೆ ಹಲವರ ಕಣ್ಣು

ಉವಾ 01/6/20

## ಮೂಲ, ವಲಸಿಗರ ನಡುವೆ ಅದೃಷ್ಟ ಪರೀಕ್ಷೆ । ಸಿಎಂ ಮೇಲೆ ಒತ್ತಡ ಹೇರುತ್ತಿರುವ ಆಕಾಂಕ್ಷಿಗಳು

**ಬೆಂಗಳೂರು:** ರಾಜ್ಯ ಬಿಜೆಪಿಯಲ್ಲಿ ಅತೃಪ್ತರು ಅಸಮಾಧಾನ ಹೊರ ಹಾಕುತ್ತಿರುವ ನಡುವೆಯೇ ವಿಧಾನ ಪರಿಷತ್ ಸ್ಥಾನಕ್ಕಾಗಿ ವಲಸಿಗರು ಹಾಗೂ ಮೂಲ ಬಿಜೆಪಿಗರು ಲಾಬಿ ಶುರು ಮಾಡಿದ್ದಾರೆ.

ಮೂಲ- ವಲಸಿಗರ ನಡುವಿನ ಈ ಆಂತರಿಕ ಪೈಪೋಟಿ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಕೊರೊನಾ ವಿರುದ್ಧದ ಹೋರಾಟದ ಜೊತೆಗೆ ದೊಡ್ಡ ಸವಾಲಾಗಿ ಪರಿಣಮಿಸುವ ಸಾಧ್ಯತೆಯಿದೆ.

ವಿಧಾನ ಪರಿಷತ್ತಿನಲ್ಲಿ ಜೂನ್ ತಿಂಗಳಲ್ಲಿ ಖಾಲಿಯಾಗುವ 16 ಸ್ಥಾನಗಳಲ್ಲಿ 5 ಸ್ಥಾನಗಳಿಗೆ ರಾಜ್ಯಪಾಲರಿಂದ ನಾಮ ನಿರ್ದೇಶನವಾಗಲಿದೆ. ಶಿಕ್ಷಕ ಹಾಗೂ ಪದವೀಧರರಲ್ಲಿ ತಲಾ 2 ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಇನ್ನು ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ 7 ಸ್ಥಾನಗಳಲ್ಲಿ ಆಡಳಿತ ಪಕ್ಷ ಬಿಜೆಪಿಗೆ 4 ಸ್ಥಾನಗಳು ದೊರೆಯಲಿವೆ. ಈ ನಾಲ್ಕು ಸ್ಥಾನಗಳಿಗಾಗಿ ವಲಸಿಗರು ಹಾಗೂ ಮೂಲ ಪಕ್ಷದವರು ಕಣ್ಣಿಟ್ಟು ಪೈಪೋಟಿ ನಡೆಸಿದ್ದಾರೆ.

**ಆಪರೇಷನ್ ವಲಸಿಗರಿಗೆ ಆದ್ಯತೆ?:** ಸಮ್ಮಿಶ್ರ ಸರ್ಕಾರವನ್ನು ಪತನಗೊಳಿಸಲು ಕಾರಣರಾದ ಆಪರೇಷನ್ ಕಮಲಕ್ಕೆ ಒಳಗಾಗಿ ಬಿಜೆಪಿ ಸೇರಿರುವ ಎಚ್.ವಿಶ್ವನಾಥ್, ಎಂಟಿಬಿ ನಾಗರಾಜ್ ಹಾಗೂ ಆರ್. ಶಂಕರ್ ಅವರಿಗೆ ಪರಿಷತ್ ಟಿಕೆಟ್ ನೀಡಬೇಕು ಎನ್ನುವುದು ವಲಸಿಗರ ಬೇಡಿಕೆ. ಅಲ್ಲದೇ ಸಿಎಂ ಯಡಿಯೂರಪ್ಪ ಕೂಡ ಪಕ್ಷಾಂತರದ ಸಂದರ್ಭದಲ್ಲಿಯೇ ಅವರಿಗೆ ಅವಕಾಶ ಕೊಡುವ ಭರವಸೆ ನೀಡಿದ್ದರು ಎಂಬ ಮಾತುಗಳು ಕೇಳಿ ಬಂದಿದ್ದವು.

ಇವರೊಂದಿಗೆ ಮೈತ್ರಿ ಸರ್ಕಾರವನ್ನು ಪತನಗೊಳಿಸಲು ಮುಂಚೂಣಿಯಲ್ಲಿ ಶ್ರಮಿಸಿರುವ ಮಾಜಿ ಸಚಿವ ಸಿ.ಪಿ. ಯೋಗೇಶ್ವರ್ ಕೂಡ ತಮ್ಮನ್ನು ಪರಿಗಣಿಸಲೇಬೇಕು ಎಂದು ಒತ್ತಡ ಹೇರುತ್ತಿದ್ದಾರೆಂದು ತಿಳಿದು ಬಂದಿದೆ.

ಇನ್ನು ಕಳೆದ ವಿಧಾನ ಸಭೆ ಚುನಾವಣೆ ವೇಳೆ ಬಿಜೆಪಿಗೆ ವಲಸೆ ಬಂದಿದ್ದ ಮಾಜಿ ಸಚಿವರಾದ ಮಾಲಿಕಯ್ಯ ಗುತ್ತೇದಾರ್ ಹಾಗೂ ಬಾಬುರಾವ್ ಚಿಂಚನಸೂರ್ ಕೂಡ ಪರಿಷತ್ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರನ್ನು ಸೋಲಿಸುವಲ್ಲಿ ತಮ್ಮ ಪಾತ್ರ ಕೂಡ ದೊಡ್ಡದು, ಹೀಗಾಗಿ, ತಮ್ಮ ಶ್ರಮಕ್ಕೆ ಬೆಲೆ ಕೊಡಬೇಕು ಎಂಬುದು ಇವರ ಆಗ್ರಹವಾಗಿದೆ.

**ಮೂಲನಿವಾಸಿಗಳ ಕಣ್ಣು:** ಎಂಟು ವರ್ಷದ ನಂತರ ರಾಜ್ಯದಲ್ಲಿ ಮತ್ತೆ ಪಕ್ಷ ಅಧಿಕಾರಕ್ಕೆ ಬಂದಿದ್ದು ಈಗ ಪರಿಷತ್‌ನಲ್ಲಿ ಅವಕಾಶ ಗಿಟ್ಟಿಸಿಕೊಳ್ಳದಿದ್ದರೆ ಮತ್ತೆ ಅವಕಾಶ ಸಿಗುವುದು ಅನುಮಾನ ಎಂಬುದು ಮೂಲ ನಿವಾಸಿಗಳ ಚಿಂತನೆ. ಆದರಲ್ಲೂ ಬಿಎಸ್‌ವೈ ಜತೆ ಕೆಜೆಪಿಗೆ ಹೋಗಿ, ವಾಪಸ್ ಬಂದವರು ತಮ್ಮ ನಿಷ್ಠೆಗೆ ಅವಕಾಶ ನೀಡಬೇಕು ಎಂದು ಬಿಎಸ್‌ವೈ ಮೇಲೆ ಒತ್ತಡ ಹೇರುತ್ತಿದ್ದಾರೆ ಎನ್ನಲಾಗುತ್ತಿದೆ.

ಸಿಎಂ ರಾಜಕೀಯ ಕಾರ್ಯದರ್ಶಿಗಳಾದ ಮೋಹನ್ ಲಿಂಬಿಕಾಯಿ, ಶಂಕರ ಪಾಟೀಲ್, ಯೋಜನಾ ಮಂಡಳಿ ಉಪಾಧ್ಯಕ್ಷ ಬಿ.ಜೆ. ಪುಟ್ಟಸ್ವಾಮಿ, ಪರಿಷತ್‌ನ ಮಾಜಿ ಸದಸ್ಯ ಶಿವರಾಜ್ ಸಜ್ಜನ್ ಕೂಡ ಕಸರತ್ತು ನಡೆಸಿದ್ದಾರೆಂದು ಹೇಳಲಾಗುತ್ತಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ದೊಡ್ಡ ಸವಾಲಾಗಿ ಪರಿಣಮಿಸುವ ಸಾಧ್ಯತೆ

### ನಿರೀಕ್ಷೆ ಇಟ್ಟುಕೊಂಡ ಬಿದರಿ, ಬಳಿಗಾರ್, ಜಗ್ಗೇಶ್, ಶ್ರುತಿ

ವಿಧಾನ ಪರಿಷತ್ತಿನಲ್ಲಿ ಖಾಲಿಯಾಗುವ ಐದು ಸ್ಥಾನಗಳಿಗೆ ನಾಮನಿರ್ದೇಶನಕ್ಕೆ ರಾಜ್ಯಪಾಲರಿಗೆ ಹೆಸರುಗಳನ್ನು ಶಿಫಾರಸು ಮಾಡುವ ಅಧಿಕಾರವನ್ನು ಸಂಪುಟದಲ್ಲಿ ಮುಖ್ಯಮಂತ್ರಿಗೆ ನೀಡಲಾಗಿದೆ. ಈ ಐದು ಸ್ಥಾನಗಳಿಗೆ ನಿವೃತ್ತ ಪೊಲೀಸ್ ಅಧಿಕಾರಿ ಶಂಕರ ಬಿದರಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮನು ಬಳಿಗಾರ್ ನಿರೀಕ್ಷೆ ಇಟ್ಟುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ. ಇನ್ನು ಸಿನಿಮಾ ರಂಗದಿಂದ ನಟ ಜಗ್ಗೇಶ್, ನಟಿ ಶ್ರುತಿ ಮೇಲ್ಮನೆ ಪ್ರವೇಶದ ನಿರೀಕ್ಷೆಯಲ್ಲಿದ್ದಾರೆಂಬ ಮಾತುಗಳು ಕೇಳಿ ಬರುತ್ತಿವೆ.

### ಸಂಘ ಪರಿವಾರದ ನಂಟು

ಇನ್ನು ಮೂಲ ಬಿಜೆಪಿಗರು ಹಾಗೂ ಸಂಘ ಪರಿವಾರದ ನಂಟಿರುವ ಕೆಲವು ಆಕಾಂಕ್ಷಿಗಳು ಸಂಘ ಹಾಗೂ ಪಕ್ಷದ ನಾಯಕರ ಮೂಲಕ ಮೇಲ್ಮನೆ ಪ್ರವೇಶದ ಕನಸು ಕಾಣುತ್ತಿದ್ದಾರೆ ಎನ್ನಲಾಗುತ್ತಿದ್ದು, ಮಾಜಿ ಶಾಸಕರಾದ ನಿರ್ಮಲಕುಮಾರ್ ಸುರಾನಾ, ವಿಶ್ವನಾಥ ಪಾಟೀಲ್ ಹೆಬ್ಬಾಳ, ಕಟ್ಟಾ ಸುಬ್ರಮಣ್ಯ ನಾಯ್ಡು, ಸುನಿಲ್ ವಲ್ಯಾಪುರೆ, ಭಾನುಪ್ರಕಾಶ್, ಲಿಂಗರಾಜ್ ಪಾಟೀಲ್, ಭಾರತಿ ಶೆಟ್ಟಿ ಸೇರಿ ಅನೇಕರು ತೆರೆ ಮರೆಯಲ್ಲಿ ಕಸರತ್ತು ನಡೆಸಿದ್ದಾರೆಂಬ ಮಾತುಗಳು ಕೇಳಿ ಬರುತ್ತಿವೆ. ಕೆಲವರು ಸಮಾಜದ ಮುಖಂಡರು ಹಾಗೂ ಸ್ವಾಮೀಜಿಗಳ ಮೂಲಕ ನಾಯಕರ ಮೇಲೆ ಒತ್ತಡ ಹೇರುವ ಪ್ರಯತ್ನ ನಡೆಸಿದ್ದಾರೆ ಎನ್ನಲಾಗುತ್ತಿದೆ.